ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯ
"ಜ್ಞಾನ ಸಾಗರ" ಆವರಣ, ವಿನಾಯಕ ನಗರ, ಕಂಟೋನ್ಮೆಂಟ್, ಬಳ್ಳಾರಿ - 583 105
VIJAYANAGARA SRI KRISHNADEVARAYA UNIVERSITY
"Jnana Sagara" Campus, Vinayaka Nagara, Cantonment, BALLARI - 583 105

ಕುಲಸಚಿವರು
☎ 08392-242703
08392-242097

ಸಂಖ್ಯೆ:ವಿಶ್ರೀಕೃವಿಬ:ವಿಮವಿ:2015-16: 1638 ದಿನಾಂಕ: 03.02.2017

## ಅಧಿಸೂಚನೆ

ವಿಷಯ : ಮಾನ್ಯತೆ ಪಡೆಯದ ರಾಜ್ಯದ ಅನ್ಯ ಪರೀಕ್ಷಾ ಮಂಡಳಿ ಹಾಗೂ ಅನ್ಯ ರಾಜ್ಯ ಪರೀಕ್ಷಾ ಮಂಡಳಿಗಳ ವಿದ್ಯಾರ್ಥಿಗಳ ಪ್ರವೇಶ ಅನರ್ಹತೆ ಕುರಿತು.

* * *

ಮಾನ್ಯ ಕುಲಪತಿಗಳ ಅನುಮೋದನೆ ಮೇರೆಗೆ, ಈ ಮೂಲಕ ಎಲ್ಲಾ ಸಂಯೋಜಿತ ಮಹಾವಿದ್ಯಾಲಯಗಳ ಪ್ರಾಚಾರ್ಯರುಗಳಿಗೆ ತಿಳಿಯಪಡಿಸುವುದೇನೆಂದರೆ, ವಿಶ್ವವಿದ್ಯಾಲಯದ ಸಂಯೋಜಿತ ಮಹಾವಿದ್ಯಾಲಯಗಳಲ್ಲಿ 2015-16 ಹಾಗೂ 2016-17ನೇ ಸಾಲಿನಲ್ಲಿ ವಿವಿಧ ಸ್ನಾತಕ ಪದವಿಗಳ ಪ್ರಥಮ ವರ್ಷಕ್ಕೆ ಪ್ರವೇಶ ಪಡೆದ ಮಾನ್ಯತೆ ಪಡೆಯದ ರಾಜ್ಯದ ಅನ್ಯ ಪರೀಕ್ಷಾ ಮಂಡಳಿ ಹಾಗೂ ಅನ್ಯ ರಾಜ್ಯ ಪರೀಕ್ಷಾ ಮಂಡಳಿಗಳ ವಿದ್ಯಾರ್ಥಿಗಳ ಪ್ರವೇಶವನ್ನು ತಕ್ಷಣದಿಂದ ಜಾರಿಗೆ ಬರುವಂತೆ ಅನರ್ಹಗೊಳಿಸಲಾಗಿದೆ. ಇನ್ನು ಮುಂದುವರೆದು, ವಿಶ್ವವಿದ್ಯಾಲಯದ ಜಾಲತಾಣದಲ್ಲಿ ಮಾನ್ಯತೆ ಪಡೆದ ರಾಜ್ಯದ ಹಾಗೂ ಅನ್ಯ ರಾಜ್ಯ ಪರೀಕ್ಷಾ ಮಂಡಳಿಗಳ ಪಟ್ಟಿಯನ್ನು ಪ್ರಕಟಿಸಲಾಗಿದ್ದು, ಸದರಿ ಪಟ್ಟಿಯನ್ನು ಹೊರತುಪಡಿಸಿ ಯಾವುದಾದರೂ ಪರೀಕ್ಷಾ ಮಂಡಳಿಯಿಂದ ತೇರ್ಗಡೆ ಹೊಂದಿ ಪ್ರವೇಶ ಪಡೆದ ವಿದ್ಯಾರ್ಥಿಗಳಿದ್ದಲ್ಲಿ ಅಂತಹ ವಿದ್ಯಾರ್ಥಿಗಳ ಪ್ರವೇಶವೂ ಕೂಡ ಅನರ್ಹಗೊಂಡಿವೆ. ಕಾರಣ, ಸಂಬಂಧಪಟ್ಟ ಮಹಾವಿದ್ಯಾಲಯಗಳ ಪ್ರಾಚಾರ್ಯರುಗಳು ಅಂತಹ ವಿದ್ಯಾರ್ಥಿಗಳು ಕಂಡುಬಂದಲ್ಲಿ ತಕ್ಷಣವೇ ಅವರುಗಳ ಪ್ರವೇಶವನ್ನು ರದ್ದುಪಡಿಸಿ ವಿಶ್ವವಿದ್ಯಾಲಯಕ್ಕೆ ಮಾಹಿತಿ ನೀಡತಕ್ಕದ್ದು, ಇಲ್ಲವಾದಲ್ಲಿ ಅಂತಹ ಪ್ರಕರಣಗಳಿಗೆ ಆಯಾ ಮಹಾವಿದ್ಯಾಲಯಗಳ ಪ್ರಾಚಾರ್ಯರುಗಳನ್ನೇ ಹೊಣೆಗಾರರನ್ನಾಗಿ ಮಾಡಲಾಗುವುದು. ಇನ್ನುಮುಂದೆ ಜಾಲತಾಣದಲ್ಲಿ ಪ್ರಕಟಿಸಲಾದ ಪರೀಕ್ಷಾ ಮಂಡಳಿಗಳಲ್ಲಿ ತೇರ್ಗಡೆ ಹೊಂದಿದ ವಿದ್ಯಾರ್ಥಿಗಳನ್ನು ಮಾತ್ರ ಪ್ರವೇಶಕ್ಕೆ ಪರಿಗಣಿಸತಕ್ಕದ್ದೆಂದು ತಿಳಿಸಲು ಮಾನ್ಯ ಕುಲಪತಿಗಳಿಂದ ನಿರ್ದೇಶಿತನಾಗಿದ್ದೇನೆ.

4/2/2017

**ಕುಲಸಚಿವರು**
ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯ
ಬಳ್ಳಾರಿ
4/2/17

**ಪ್ರತಿಗಳು:**

1. ಮಾನ್ಯ ಕುಲಪತಿಗಳ ಆಪ್ತ ಕಾರ್ಯದರ್ಶಿ, ವಿ.ಶ್ರೀ.ಕೃ.ವಿಶ್ವವಿದ್ಯಾಲಯ, ಬಳ್ಳಾರಿ, ಇವರ ಮಾಹಿತಿಗಾಗಿ.
2. ಕುಲಸಚಿವರು(ಮೌಲ್ಯಮಾಪನ), ವಿ.ಶ್ರೀ.ಕೃ.ವಿಶ್ವವಿದ್ಯಾಲಯ, ಬಳ್ಳಾರಿ.
3. ಎಲ್ಲಾ ಸಂಯೋಜಿತ ಸ್ನಾತಕ ಪದವಿ ಮಹಾವಿದ್ಯಾಲಯಗಳ ಪ್ರಾಚಾರ್ಯರು, ವಿ.ಶ್ರೀ.ಕೃ.ವಿಶ್ವವಿದ್ಯಾಲಯ ಬಳ್ಳಾರಿ.
4. ಕಛೇರಿ ಪ್ರತಿ.